ನಿ-72
ಕ್ರ-54
ಕಂಪ್ಯೂಟರ್

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಎಲ್. ಭೋಜೇಗೌಡ (ನೈರುತ್ಯ ಶಿಕ್ಷಕರ ಕ್ಷೇತ್ರ) ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ.

**ವಿಷಯ:-**

"ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವು ಬೆಂಗಳೂರಿನಲ್ಲಿ ಪ್ರಾರಂಭಗೊಂಡು ಮೊದಲು ವಿಶ್ವವಿದ್ಯಾಲಯದ ಚಟುವಟಿಕೆಗಳನ್ನು ಕೈಗೊಳ್ಳಲು ವಿಶೇಷಾಧಿಕಾರಿಯನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಸದರಿ ಅಧಿಕಾರಿಯು ಅಗತ್ಯತೆಗನುಗುಣವಾಗಿ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಸಂಚಿತ ವೇತನ ಅಧಾರದ ಮೇಲೆ ಹಲವಾರು ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದ್ದರು. ಇದರಲ್ಲಿ ಪ್ರನೂಪ್ ಎಸ್. ಇವರು ಕಚೇರಿ ಸಹಾಯಕ (ಗ್ರೂಪ್ ಡಿ) ಹುದ್ದೆಯಡಿ ನೇಮಕಗೊಂಡಿದ್ದು, ಇವರಿಗೆ ಸೆಪ್ಟಂಬರ್ 2019ರ ಅರ್ಧ ತಿಂಗಳ ವೇತನ ಮಾತ್ರ ನೀಡಿದ್ದು, ಬಾಕಿ 13 ತಿಂಗಳ ವೇತನ ನೀಡಿರುವುದಿಲ್ಲ. ಇದರ ಸಂಬಂಧ ಸದನದಲ್ಲಿ ಸರ್ಕಾರದ ಗಮನ ಸೆಳೆದಾಗ ಇವರನ್ನು ಕೆಲಸದಿಂದ ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಇವರಿಗೆ ಬಾಕಿ ಬರಬೇಕಾಗಿರುವ ವೇತನವನ್ನು ಪಾವತಿ ಮಾಡುವ ಸಂಬಂಧ ಅರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಅನುದಾನ ಒದಗಿಸಿದ ನಂತರ ಪಾವತಿ ಮಾಡಲಾಗುವುದು ಎಂದು ಸಚಿವರು ಭರವಸೆ ನೀಡಿದ್ದರು. ಆ ಭರವಸೆ ಭರವಸೆಯಾಗಿಯೇ ಉಳಿದಿರುತ್ತದೆ.

ಬೋಧಕೇತರ ಸಿಬ್ಬಂದಿಯ ನೇಮಕಕ್ಕೆ ಸಂಬಂಧಿಸಿದ ಯಾವುದೇ ದಾಖಲೆಗಳು ಲಭ್ಯವಿಲ್ಲವೆಂದು ಇಲಾಖೆ ಹೇಳಿರುವುದು ಸಮಂಜಸವಲ್ಲ. ಹಾಗಾದರೆ ಪ್ರನೂಪ್. ಎಸ್ ರವರಿಗೆ ಅರ್ಧ ತಿಂಗಳ ವೇತನವನ್ನು ಬ್ಯಾಂಕ್ ಖಾತೆಗೆ ಜಾಮಾಮಾಡಿರುವುದು ಸುಳ್ಳೇ, ಸಿಬ್ಬಂದಿಗಳು ಸಹಿ ಮಾಡಿದ ಹಾಜರಾತಿ ಪುಸ್ತಕವನ್ನು ಪರಿಶೀಲಿಸಿ ಪ್ರನೂಪ್. ಎಸ್ ಮತ್ತು ಇವರ ಜೊತೆಯಲ್ಲಿಯೇ ಸದರಿ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಎಲ್ಲಾ ಸಿಬ್ಬಂದಿಗಳಿಗೂ ಬಾಕಿ ಇರುವ ವೇತನವನ್ನು ಪಾವತಿ ಮಾಡುವ ಬಗ್ಗೆ.

## ಉತ್ತರ

ಪ್ರಥಮ ಕುಲಪತಿಯನ್ನು ನೇಮಿಸುವವರೆಗೆ, ಏಕಾತ್ಮಕ ಸ್ವರೂಪದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸ್ಥಾಪನೆಗೆ ಕ್ರಮಗಳನ್ನು ಕೈಗೊಳ್ಳುವ ಉದ್ದೇಶಕ್ಕಾಗಿ ನೇಮಿಸಲಾಗಿರುವ ವಿಶೇಷಾಧಿಕಾರಿಯು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ 2019 (2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 15)ರ ಪ್ರಕರಣ 17ರಲ್ಲಿ ಉಪಬಂಧಿಸುವ ಮೇರೆಗೆ, ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂತೆ ಅನುಕ್ರಮವಾಗಿ ವಿಶ್ವವಿದ್ಯಾಲಯದ ಮತ್ತು ಕುಲಪತಿಗಳ ಅಂಥ ಅಧಿಕಾರಗಳನ್ನು ಚಲಾಯಿಸಬೇಕಾಗುತ್ತದೆ ಹಾಗೂ ಅಂಥ ಪ್ರಕಾರ್ಯಗಳನ್ನು ನಿರ್ವಹಿಸಬೇಕಾಗುತ್ತದೆ. ಆದರೆ ಸರ್ಕಾರವು ಅಂಥ ಅಧಿಕಾರಗಳನ್ನು ನಿರ್ದಿಷ್ಟಪಡಿಸದೇ ಇರದ ಸನ್ನಿವೇಶದಲ್ಲಿ ಸರ್ಕಾರದ ಪೂರ್ವಾನುಮೋದನೆಯನ್ನು ಪಡೆಯದೇ ಹಾಗೂ ಸರ್ಕಾರದ ಗಮನಕ್ಕೆ ತಾರದೇ ಮತ್ತು ವೇತನ ಪಾವತಿಗೆ ಹಣಕಾಸಿನ ಅವಕಾಶ ಕಲ್ಪಿಸಿಕೊಳ್ಳದೇ ಅಂದಿನ ವಿಶೇಷಾಧಿಕಾರಿಗಳು ತಾತ್ಕಾಲಿಕ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿಕೊಂಡಿರುತ್ತಾರೆ.

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಶ್ರೀ ಪ್ರನೂಪ್ ಎಸ್. ಬಿನ್: ಶೇಖರಪ್ಪ, ಗ್ರೂಪ್ 'ಡಿ' ನೌಕರ ಹಾಗೂ ಇವರ ಜೊತೆಯಲ್ಲಿಯೇ ಕರ್ತವ್ಯ ನಿರ್ವಹಿಸಿದ್ದಾರೆ ಎನ್ನಲಾದ ಸಿಬ್ಬಂದಿಗಳ ಬಾಕಿ ವೇತನ ಇದ್ದಲ್ಲಿ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗಿದ್ದು, ಶ್ರೀ ಪ್ರನೂಪ್ ಎಸ್. ಇವರು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸಿರುವ ಸಂಬಂಧ ನೇಮಕಾತಿ ಆದೇಶವಾಗಲೀ ಅಥವಾ ಹಾಜರಾತಿಯಾಗಲೀ ಲಭ್ಯವಿರುವುದಿಲ್ಲ. ಆದುದರಿಂದ, ಬಾಕಿ ವೇತನ ಪಾವತಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

**ಸಂಖ್ಯೆ: ಇ-ಕಛೇರಿ ಸಂಖ್ಯೆ: ಇಡಿ/311/ಯುಆರ್‌ಸಿ/2022**

**(ಡಾ|| ಅಶ್ವಥ್‌ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಇಲಾಖೆ ಸಚಿವರು